**ಪ್ರಥಮ ದರ್ಜೆಯ ನ್ಯಾಯಿಕ ದಂಡಾಧಿಕಾರಿಗಳ ನ್ಯಾಯಾಲಯ, ಸೇಡಂ.**

ಸಿ.ಸಿ. ನಂಃ 445/2015 ಸಿಡಬ್ಲೂ: 1 ಪಿಡಬ್ಲೂ: 1

ಪ್ರಮಾಣವಚನ ಬೋಧಿಸಲಾಯಿತು ದಿಃ 05-03-2026

ಹೆಸರು : ಸಿದ್ದರಾಮಪ್ಪ

ತಂದೆ ಹೆಸರು : ದೇವಪ್ಪ

ವಯಸ್ಸು : 71 ವರ್ಷ

ಉದ್ಯೋಗ : ಬೇಕಾರ್

ವಾಸಸ್ಥಳ : ಕೋಡ್ಲಾ

**:ಮುಖ್ಯ ವಿಚಾರಣೆ ಮಾನ್ಯ ಸಹಾಯಕ ಸರ್ಕಾರಿ ಅಭಿಯೋಜಕರವರಿಂದ:**

ಆರೋಪಿತರು ಗೊತ್ತು. ಆರೋಪಿತರು ಮತ್ತು ನನ್ನ ನಡುವೆ ಯಾವುದೇ ರೀತಿಯ ಗಲಾಟೆ ಆಗಿರುವುದಿಲ್ಲ. ಆರೋಪಿತರು ನನಗೆ ಹೊಡೆ ಬಡೆ ಮಾಡಿ ಜೀವ ಬೆದರಿಕೆ ಹಾಕಿಲ್ಲ ಮತ್ತು ಅವಾಚ್ಯ ಶಬ್ದಗಳಿಂದ ಬೈದಿರುವುದಿಲ್ಲ. ನಾನು ಯಾವುದೇ ರೀತಿಯ ಪಿರ್ಯಾದನ್ನು ನೀಡಿಲ್ಲ ಮತ್ತು ಈ ಪ್ರಕರಣದ ಬಗ್ಗೆ ಯಾವುದೇ ರೀತಿಯ ಮಾಹಿತಿ ಇಲ್ಲ.

ಸಾಕ್ಷಿಗೆ ಒಂದು ದಾಖಲಾತಿಯನ್ನು ತೋರಿಸಲಾಗಿ ಸದರಿ ದಾಖಲಾತಿಯು ದೂರಾಗಿದ್ದು ಸಾಕ್ಷಿಯು ಸದರಿ ದಾಖಲಾತಿ ನೋಡಿ ಗುರುತಿಸಿರುವುದರಿಂದ ಅದನ್ನು ನಿಪಿ-1 ಎಂದು ಗುರುತಿಸಲಾಗಿದೆ ಹಾಗು ಅದರಲ್ಲಿ ಇರುವ ಸಾಕ್ಷಿಯ ಸಹಿಯನ್ನು ನಿಪಿ-1(ಎ) ಎಂದು ಗುರುತಿಸಲಾಯಿತು. ಆದರೇ ನಿಪಿ-1 ರಲ್ಲಿರುವ ವಿಷಯಗಳು ನನಗೆ ಗೊತ್ತಿಲ್ಲ.

**(ಈ ಹಂತದಲ್ಲಿ ಮಾನ್ಯ ಸ.ಸ.ಅ ರವರು ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟೀಸವಾಲಿಗೆ ಅನುಮತಿ ಕೋರಿರುತ್ತಾರೆ, ಅನುಮತಿ ನೀಡಲಾಯಿತು)**

**ಪಾಟೀಸವಾಲುಃ** ಮಾನ್ಯ ಸ.ಸ.ಅ ರವರಿಂದ:

ದಿಃ13-04-2015 ರಂದು ಸಾಯಂಕಾಲ 07-00 ಗಂಟೆ ಸುಮಾರಿಗೆ ಖೊಡ್ಲಾ ಗ್ರಾಮದ ವೈನ್ ಶಾಪ್ ಎದುರುಗಡೆ ನಿಂತಾಗ ಆರೋಪಿತರೆಲ್ಲಾರೂ ಕೂಡಿಕೊಂಡು ಬಂದು ಅದರಲ್ಲಿ 1 ನೇ ಆರೋಪಿತನು ಬಂದು ನನಗೆ ಏ ಬೋಸಡಿ ಮಗನೆ ಅಂತಾ ಅವಾಚ್ಯ ಶಬ್ದಗಳಿಂದ ಬೈದು ಕೈಯಿಂದ ಹೊಡೆ ಬಡೆ ಮಾಡಿರುತ್ತಾನೆ ಎಂದರೆ ಸರಿಯಿಲ್ಲ. 2 ನೇ ಆರೋಪಿತನು ಕಲ್ಲಿನಿಂದ ನನ್ನ ತಲೆಗೆ

ಹೋಡೆದು ರಕ್ತ ಗಾಯ ಪಡಿಸಿರುತ್ತಾನೆ ಎಂದರೆ ಸರಿಯಿಲ್ಲ. 3 ನೇ ಆರೋಪಿತನು ಕೈಯಿಂದ ಹೊಡೆದಿರುತ್ತಾನೆ ಎಂದರೆ ಸರಿಯಿಲ್ಲ. ಅದೇ ರೀತಿ 1 ನೇ ಆರೋಪಿತನು ನನ್ನ ಬೆನ್ನಿಗೆ ಹೊಡೆ ಬಡೆ ಮಾಡಿರುತ್ತಾನೆ ಎಂದರೆ ಸರಿಯಿಲ್ಲ. ಆಗ ಚಾ ಸಾ 4 ರಿಂದ 6 ರವರ ಬಂದು ಜಗಳ ಬಿಡಿಸಿರುತ್ತಾರೆ ಎಂದರೆ ಸರಿಯಿಲ್ಲ. ಜಗಳ ಬಿಟ್ಟು ಹೊಗುವಾಗ ಜೀವ ಬೆದರಿಕೆ ಹಾಕಿದರು ಎಂದರೆ ಸರಿಯಿಲ್ಲ. ಸಾಕ್ಷಿಗೆ ಎರಡು ಕಲ್ಲು ಮತ್ತು ಒಂದು ಬಡಿಗೆಯನ್ನು ತೋರಿಸಲಾಗಿ ಸಾಕ್ಷಿಯು ಅದನ್ನು ನೋಡಿ ಗುರುತಿಸಲು ನಿರಾಕರಿಸಿರುವುದರಿಂದ ಅದನ್ನು ಮು ಮಾ 1 ರಿಂದ 3 ಎಂದು ಗುರುತಿಸಲಾಯಿತು.

**ಪಾಟೀಸವಾಲುಃ** ಆರೋಪಿ ಪರ ವಕೀಲರಿಂದ: ವಕೀಲರು ಪಾಟೀಸವಾಲು ಇರುವುದಿಲ್ಲವೆಂದು ತಿಳಿಸಿರುತ್ತಾರೆ.

ಮರುವಿಚಾರಣೆಃ ಇಲ್ಲ

**(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತ ಲೇಖನದಂತೆ ಬೆರಳಚ್ಚು ಮಾಡಲಾಯಿತು)**

**ಓ. ಹೇ. ಕೇ. ಸರಿ. ಇದೆ.**

**ಪ್ರ. ದ. ನ್ಯಾ. ದಂ. ಸೇಡಂ.**

Accused-1 present. CW.1 is present and examined as PW-1. Ex.P-1, E.P-1(a) and MO NO.1 to 3 is marked. Prayer of the learned APP to summon other witnesses is rejected as material witness is turned hostile.

Sec.313 statement of the accused is dispensed with as there is no incriminating evidence. For compliance. Call on 06-03-2026.